# ಹಳೆ ವಿದ್ಯಾರ್ಥಿಗಳ ಸಮ್ಮೇಳನ

ಮಂಗಳೂರು: ಸುರತ್ಕಲ್‌ನ ಎನ್‌ಐಟಿಕೆ ಹಳೆ ವಿದ್ಯಾರ್ಥಿ ಸಂಘದ ವತಿಯಿಂದ 14ನೇ ಜಾಗತಿಕ ಸಮ್ಮೇಳನ ಡಿ.23ಮತ್ತು 24ರಂದು ನಡೆಯಲಿದೆ.

ಸುದ್ದಿಗೋಷ್ಠಿಯಲ್ಲಿಂದು ಮಾತನಾಡಿದ ಸಮ್ಮೇಳನದ ಸಂಚಾಲಕ ವಿಠಲ್ ಬಿ. ಪರ್ವತಿಕಾರ್, 2020ರಲ್ಲಿ ಸಂಘದ ವಜ್ರ ಮಹೋತ್ಸವದ ಅಂಗವಾಗಿ ಎನ್‌ಐಟಿಕೆಯ ಕ್ಯಾಂಪಸ್‌ನಲ್ಲಿ ಈ ಜಾಗತಿಕ ಸಮ್ಮೇಳನ ಆಯೋಜಿಸಲಾಗಿದ್ದು, ಸುಮಾರು 600ರಷ್ಟು ಪ್ರತಿನಿಧಿಗಳು ಭಾಗವಹಿಸುವ ನಿರೀಕ್ಷೆ ಇದೆ ಎಂದರು. ಬೆಂಗಳೂರಿನ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್‌ನ ಪ್ರೊ. ತ್ರಿಲೋಚನ್ ಶಾಸ್ತ್ರಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದು, ಡಿ.23ರಂದು ಬೆಳಗ್ಗೆ 10.15ಕ್ಕೆ ಉದ್ಘಾಟನಾ ಸಮಾರಂಭ ನಡೆಯಲಿದೆ. ಕೀರ್ತಿರಾಜ್ ಸಾಲಿಯಾನ್ ದಿಕ್ಸೂಚಿ ಭಾಷಣ ನೀಡಲಿದ್ದಾರೆ. 1965ನೇ ಪ್ರಥಮ ಬ್ಯಾಚ್ ಪದವೀಧರರೂ ಸೇರಿದಂತೆ ಇತರರ ಸನ್ಮಾನ ಕಾರ್ಯಕ್ರಮ ನಡೆಯಲಿದೆ. ಡಿ.24ರಂದು ಸಂಜೆ 4ಕ್ಕೆ ಸಮಾರೋಪ ನಡೆಯಲಿದ್ದು, ಈ ಸಂದರ್ಭ ವಿವಿಧ ಪ್ರದರ್ಶನ ಆಯೋಜಿಸಲಾಗಿದೆ ಎಂದರು. ಎನ್‌ಐಟಿಕೆ ಹಳೆ ವಿದ್ಯಾರ್ಥಿಗಳಾದ ಅಜಿತ್ ಕರ್ವಾಕರ್, ವಿಷ್ಣುದಾಸ್ ಪೈ, ಎನ್‌ಐಟಿಕೆಯ ಪ್ರೊ. ಅರುಣ್ ಎಂ. ಇಸ್ಲೂರ್, ಸಾರ್ವಜನಿಕ ಸಂಪರ್ಕ ಅಧಿಕಾರಿ ವೈಷ್ಣವಿ ಉಪಸ್ಥಿತರಿದ್ದರು.

# ತೀರ್ಥಕ್ಷೇತ್ರ ರಕ್ಷಣೆಗೆ ಮನವಿ

ಉಜಿರೆ: ಜಾರ್ಖಂಡ್ ರಾಜ್ಯದಲ್ಲಿರುವ ಜೈನರ ಪವಿತ್ರ ಕ್ಷೇತ್ರ ಸಮ್ಮೇದಗಿರಿ ಕ್ಷೇತ್ರವನ್ನು ಸರ್ಕಾರವು ಪ್ರವಾಸಿತಾಣವಾಗಿ ರೂಪಿಸಲು ಯೋಜಿಸಿದ್ದು ಇದನ್ನು ಖಂಡಿಸಿ ಮಂಗಳವಾರ ಬೆಳ್ತಂಗಡಿಯಲ್ಲಿ ಜೈನ ಸಮಾಜದವರು ತಹಶೀಲ್ದಾರ್ ಪೃಥ್ವಿ ಸಾನಿಕಂ ಮೂಲಕ ಪ್ರಧಾನಿ ಮತ್ತು ರಾಷ್ಟ್ರಪತಿ ಅವರಿಗೆ ಮನವಿ ಸಲ್ಲಿಸಿದರು. ಡಾ. ಜಯಕೀರ್ತಿ ಜೈನ್, ಡಾ. ಹಾ.ಮಾ.ನಾ. ಸಂಶೋಧನಾ ಕೇಂದ್ರದ ನಿರ್ದೇಶಕ ಡಾ. ಎಸ್.ಡಿ. ಶೆಟ್ಟಿ, ಸುಗುಣಾ ಎಸ್.ಡಿ. ಶೆಟ್ಟಿ, ವಿಜಯಕುಮಾರ್ ಜೈನ್, ನಿರಂಜನ್ ಜೈನ್ ಕುದ್ಯಾಡಿ ಮೊದಲಾದವರು ಉಪಸ್ಥಿತರಿದ್ದರು.

Samyutha Karnataka, Date:21/12/22, p.no-03